**All India Radio: Bangalore**
**National Bulletin In Kannada**
**04.07.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**04.07.2025 1.10 p.m.**
**<><><><>**

ಮುಖ್ಯಾಂಶಗಳು :

1. ಜುಲೈ ೨೧ರಿಂದ ಆಗಸ್ಟ್ ೨೧ರವರೆಗೆ ಸಂಸತ್ ಅಧಿವೇಶನ : ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದನೆ
2. ಟ್ರಿನಿಡಾಡ್-ಟೊಬ್ಯಾಗೊ ಪ್ರವಾಸದಲ್ಲಿ ಪ್ರಧಾನಿ ನರೇಂದ್ರ ಮೋದಿ : ಇಂದು ದ್ವಿಪಕ್ಷೀಯ ಸಮಾಲೋಚನೆ
3. ವಿಶ್ವ ಬಾಕ್ಸಿಂಗ್ ಪಂದ್ಯಾವಳಿ ; ಭಾರತದ ಐವರು ಸೆಮಿಫೈನಲ್ಸ್‌ಗೆ
4. ಟಿ-೨೦ ಮಹಿಳಾ ಕ್ರಿಕೆಟ್ : ಇಂಗ್ಲೆಂಡ್ ವಿರುದ್ಧ ಗೆದ್ದು ಸರಣಿ ಕೈವಶದ ಉತ್ಸಾಹದಲ್ಲಿ ಭಾರತದ ವನಿತೆಯರು

<><><><>

ಜುಲೈ ೨೧ ರಂದು ಮಳೆಗಾಲದ ಸಂಸತ್ ಅಧಿವೇಶನ ಪ್ರಾರಂಭವಾಗಲಿದ್ದು ಆಗಸ್ಟ್ ೨೧ರವರೆಗೆ ನಡೆಯಲಿದೆ. ಅಧಿವೇಶನ ಕರೆಯುವ ಪ್ರಸ್ತಾವನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದನೆ ನೀಡಿದ್ದಾರೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಪಾಕಿಸ್ತಾನದ ವಿರುದ್ಧ ಭಾರತ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನ ಇದಾಗಿದ್ದು, ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಆಗಸ್ಟ್ ೧೨ರಿಂದ ೧೮ರವರೆಗೆ ಯಾವುದೇ ಕಲಾಪ ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಹಿಂದಿನ ಕಲಾಪದ ವೇಳಾಪಟ್ಟಿಯಂತೆ ಆಗಸ್ಟ್ ೧೨ರಂದು ಅಧಿವೇಶನ ಪೂರ್ಣಗೊಳ್ಳಬೇಕಿತ್ತು. ಆದರೆ ಒಂದುವಾರ ಕಲಾಪವನ್ನು ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಟ್ರಿನಿಡಾಡ್ ಮತ್ತು ಟೊಬಾಗೋದಲ್ಲಿ ಭಾರತೀಯ ಸಮುದಾಯ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಐದು ರಾಷ್ಟ್ರಗಳ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಟ್ರಿನಿಡಾಡ್ ಮತ್ತು ಟೊಬಾಗೋದಲ್ಲಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದರು. ನಮ್ಮ ಪೂರ್ವಜರು ಭರವಸೆಯಿಂದ ಮತ್ತು ಕಠಿಣ ಪರಿಶ್ರಮದಿಂದ ಕೆಲಸ ಮಾಡಿದ್ದಾರೆ. ಅವರು ತಮ್ಮ ಹೃದಯದಲ್ಲಿ ರಾಮಾಯಣ ಮಹಾಕಾವ್ಯವನ್ನು ಹೊತ್ತು ತಂದಿದ್ದರು. ಅವರೆಲ್ಲಾ ವಲಸಿಗರಲ್ಲ, ಕಾಲಾತೀತ ನಾಗರಿಕತೆಯ ಸಂದೇಶವಾಹಕರು ಎಂದು ಹೇಳಿದರು.

ಕೆರಿಬಿಯನ್ ಪ್ರದೇಶದಲ್ಲಿ ಯುಪಿಐ ಅಳವಡಿಸಿಕೊಂಡ ಮೊದಲ ರಾಷ್ಟ್ರವಾದ ಟ್ರಿನಿಡಾಡ್ ಮತ್ತು ಟೊಬಾಗೋಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದರು. ಯುಪಿಐ ಅಳವಡಿಸಿಕೊಳ್ಳುವುದು ಈ ದೇಶಕ್ಕಷ್ಟೇ ಅಲ್ಲದೇ ಭಾರತಕ್ಕೂ ಪ್ರಯೋಜನಕಾರಿಯಾಗಿದೆ. ಇಂಟರ್ನ್ಯಾಷನಲ್ ಪೇಮೆಂಟ್ಸ್ ಲಿಮಿಟೆಡ್ - ಎನ್‌ಐಪಿಎಲ್ ಅನ್ನು

ಸಬಲೀಕರಣಗೊಳಿಸುವುದು ಭಾರತದ ಗುರಿಯಾಗಿದೆ. ಡಿಜಿಟಲ್ ಮೂಲ ಸೌಕರ್ಯ ಸಾರ್ವಜನಿಕ ಸರಕುಗಳನ್ನು ರಫ್ತು ಮಾಡುವ ಮೂಲಕ ವಿಶ್ವಾಸಾರ್ಹತೆಯನ್ನು ಪಡೆಯುತ್ತದೆ, ಪರಸ್ಪರ ಕಾರ್ಯಸಾಧ್ಯತೆ, ಹಣಕಾಸು ಸೇರ್ಪಡೆ ಮತ್ತು ದೇಶೀಯ ಹಣಕಾಸು ನಾವೀನ್ಯತೆಯನ್ನು ಇದರಿಂದ ಉತ್ತೇಜಿಸಬಹುದಾಗಿದೆ ಎಂದರು. ಪ್ರಧಾನಿಯವರು ನಿನ್ನೆ ರಾತ್ರಿ ತಮ್ಮ ಐದು ರಾಷ್ಟ್ರಗಳ ಪ್ರವಾಸದ ಎರಡನೇ ಚರಣದಲ್ಲಿ ಟ್ರಿನಿಡಾಡ್ ಮತ್ತು ಟೊಬಾಗೋದ ಪೋರ್ಟ್ ಆಫ್ ಸ್ಪೇನ್ ತಲುಪಿದರು. ಟ್ರಿನಿಡಾಡ್ ಮತ್ತು ಟೊಬಾಗೋದ ಪ್ರಧಾನಿ ಕಮಲಾ ಪರ್ಸಾದ್-ಬಿಸ್ಸೆಸ್ಸರ್ ಅವರು ತಮ್ಮ ಸಂಪುಟದ ಸದಸ್ಯರು ಮತ್ತು ಇತರ ಹಲವಾರು ಗಣ್ಯರೊಂದಿಗೆ ಪೋರ್ಟ್ ಆಫ್ ಸ್ಪೇನ್‌ನ ವಿಮಾನ ನಿಲ್ದಾಣದಲ್ಲಿ ನರೇಂದ್ರ ಮೋದಿ ಅವರನ್ನು ಬರಮಾಡಿಕೊಂಡರು. ಪ್ರಧಾನಮಂತ್ರಿ ಅವರಿಗೆ ವಿಧ್ಯುಕ್ತವಾಗಿ ಗೌರವ ವಂದನೆ ನೀಡಲಾಯಿತು. ವಿಶೇಷ ಸಾಂಸ್ಕೃತಿಕ ಪ್ರದರ್ಶನಗಳೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಬರಮಾಡಿಕೊಳ್ಳಲಾಯಿತು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ನರೇಂದ್ರ ಮೋದಿ ಅವರು, ಭಾರತೀಯರು ಹಲವಾರು ವರ್ಷಗಳ ಹಿಂದೆ ಟ್ರಿನಿಡಾಡ್ ಮತ್ತು ಟೊಬಾಗೋಗೆ ತೆರಳಿದ್ದರು. ಅವರು ಹಲವಾರು ಕ್ಷೇತ್ರಗಳಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ ಮತ್ತು ರಾಷ್ಟ್ರದ ಅಭಿವೃದ್ಧಿ ಪ್ರಯಾಣವನ್ನು ಶ್ರೀಮಂತಗೊಳಿಸುತ್ತಿದ್ದಾರೆ ಎಂದರು. ನರೇಂದ್ರ ಮೋದಿ ಅವರು ಪ್ರಧಾನಮಂತ್ರಿಯಾಗಿ ದೇಶಕ್ಕೆ ನೀಡಿದ ಮೊದಲ ಭೇಟಿ ಮತ್ತು ೧೯೯೯ ರ ನಂತರ ಟ್ರಿನಿಡಾಡ್ ಮತ್ತು ಟೊಬೆಗೊಗೆ ಪ್ರಧಾನಿ ಹಂತದ ಮೊದಲ ದ್ವಿಪಕ್ಷೀಯ ಪ್ರವಾಸವಾಗಿದೆ. ತಮ್ಮ ಎರಡು ದಿನಗಳ ಭೇಟಿಯ ಸಮಯದಲ್ಲಿ, ಪ್ರಧಾನಿಯವರು ಟ್ರಿನಿಡಾಡ್ ಮತ್ತು ಟೊಬೆಗೊ ಅಧ್ಯಕ್ಷರಾದ ಕ್ರಿಸ್ಟೀನ್ ಕಾರ್ಲಾ ಕಂಗಲೂ ಮತ್ತು ಪ್ರಧಾನಿ ಕಮಲಾ ಪರ್ಸಾದ್-ಬಿಸ್ಸೆಸ್ಸರ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಪ್ರಧಾನ ಮಂತ್ರಿ ಅವರು ಟ್ರಿನಿಡಾಡ್ ಮತ್ತು ಟೊಬೆಗೊ ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><><><>

ಇಂದು ಸ್ವಾಮಿ ವಿವೇಕಾನಂದರ ಪುಣ್ಯತಿಥಿ. ಪ್ರಧಾನಿ ನರೇಂದ್ರ ಮೋದಿ ಸ್ವಾಮಿ ವಿವೇಕಾನಂದರಿಗೆ ಗೌರವ ನಮನ ಸಲ್ಲಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸ್ವಾಮಿ ವಿವೇಕಾನಂದರ ಚಿಂತನೆಗಳು ಮತ್ತು ದೃಷ್ಟಿಕೋನಗಳು ನಮ್ಮ ಸಮಾಜಕ್ಕೆ ಮಾರ್ಗದರ್ಶಕ ಮತ್ತು ಬೆಳಕಾಗಿ ಉಳಿದಿವೆ. "ಸ್ವಾಮಿ ವಿವೇಕಾನಂದರು ನಮ್ಮ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಬಗ್ಗೆ ಹೆಮ್ಮೆ ಮತ್ತು ವಿಶ್ವಾಸವನ್ನು ಮೂಡಿಸಿದ್ದಾರೆ ಎಂದು ಸ್ಮರಿಸಿಕೊಂಡಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಸ್ವಾಮಿ ವಿವೇಕಾನಂದರು, ಭಾರತೀಯ ತತ್ವಶಾಸ್ತ್ರ ಮತ್ತು ಸಾಂಸ್ಕೃತಿಕ ಹೆಮ್ಮೆಯ ಪುನರುಜ್ಜೀವನದ ಪ್ರವರ್ತಕ ಎಂದು ಹೇಳಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸ್ವಾಮಿ ವಿವೇಕಾನಂದರಿಗೆ ಗೌರವ ಸಲ್ಲಿಸಿದ್ದಾರೆ. ಸಮೃದ್ಧ ಮತ್ತು ಪ್ರಗತಿಪರ ಭಾರತವನ್ನು ನಿರ್ಮಿಸುವ ಅವರ ಕನಸನ್ನು ನನಸಾಗಿಸಲು ನಾವೆಲ್ಲರೂ ಸಂಪೂರ್ಣವಾಗಿ ಬದ್ಧರಾಗಿದ್ದೇವೆ, ಎಂದು ತಿಳಿಸಿದ್ದಾರೆ.

<><><><>

ಉಪರಾಷ್ಟ್ರಪತಿ ಜಗದೀಪ್ ಧನಕರ್ ಇದೇ ಭಾನುವಾರದಿಂದ ಎರಡು ದಿನಗಳ ಕಾಲ ಕೇರಳಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ತ್ರಿಶೂರ್ ಜಿಲ್ಲೆಯ ಪವಿತ್ರ ಗುರುವಾಯೂರ್ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ.

ಉಪರಾಷ್ಟ್ರಪತಿಗಳು ಕೊಚ್ಚಿಯ ರಾಷ್ಟ್ರೀಯ ಉನ್ನತ ಕಾನೂನು ಅಧ್ಯಯನ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ನವದೆಹಲಿಯಲ್ಲಿ ನಿನ್ನೆ ೨೯ನೇ ಅಂತಾರಾಷ್ಟ್ರೀಯ ಸಮ್ಮೇಳನ, ಪ್ರಸಾರ ಮತ್ತು ಮಾಧ್ಯಮ ತಂತ್ರಜ್ಞಾನ ಪ್ರದರ್ಶನ-ಬಿಇಎಸ್ ಎಕ್ಸ್ ಪೋ ೨೦೨೫ಕ್ಕೆ ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ ಚಾಲನೆ ನೀಡಿದರು. ಅತ್ಯಾಧುನಿಕ ಪ್ರಸಾರ ವಿಷಯಗಳ ಕುರಿತು ಈ ಸಂದರ್ಭದಲ್ಲಿ ಚರ್ಚೆ ನಡೆಯಿತು. ಬಳಿಕ ಮಾತನಾಡಿದ ನವನೀತ್ ಕುಮಾರ್ ಸೆಹಗಲ್, ಕಳೆದ ೧೦ ವರ್ಷಗಳಲ್ಲಿ ಡಿಜಿಟಲ್ ಮೂಲ ಸೌಕರ್ಯ ವಲಯ ವ್ಯಾಪಕವಾಗಿ ಬೆಳೆದಿದೆ. ಸಂವಹನ ಮತ್ತು ಪ್ರಸಾರ ಕ್ಷೇತ್ರದಲ್ಲಿ ಹಲವಾರು ಪ್ರಯೋಗಗಳಾಗಿವೆ. ದೇಶದ ಪ್ರತಿಯೊಬ್ಬ ನಾಗರಿಕರಿಗೆ ಸೂಕ್ತ ಮಾಹಿತಿ ಒದಗಿಸುವುದು ಪ್ರಸಾರ ಭಾರತಿ ಕರ್ತವ್ಯವಾಗಿದೆ ಎಂದರು.

**ಧ್ವನಿ : ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ (೨೧ ಸೆಕೆಂಡುಗಳು)**

ಪ್ರಸಾರಭಾರತಿ ಮುಖ್ಯ ಕಾರ್ಯಾನಿರ್ವಹಣಾಧಿಕಾರಿ ಗೌರವ್ ದ್ವಿವೇದಿ ಮಾತನಾಡಿ, ಈಗಿನ ತಂತ್ರಜ್ಞಾನಗಳ ಸವಾಲುಗಳ ನಡುವೆಯೂ ಪ್ರಸಾರ ವಲಯದ ಕಾರ್ಯವೈಖರಿಯಲ್ಲಿ ಬದಲಾವಣೆ ತರಬೇಕಾಗಿದೆ ಎಂದರು.

<><><>

ಕಝುಕಿಸ್ತಾನದಲ್ಲಿ ನಡೆಯುತ್ತಿರುವ ವಿಶ್ವ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ಭಾರತದ ಹಿತೇಶ್ ಗುಲಿಯಾ ಮತ್ತು ಸಾಕ್ಷಿ ಸೆಮಿಫೈನಲ್ಸ್ ಗೆ ಲಗ್ಗೆ ಇಟ್ಟಿದ್ದಾರೆ. ಈ ವರ್ಷದ ಆರಂಭದಲ್ಲಿ ಬ್ರೆಜಿಲ್ ನಲ್ಲಿ ಚಿನ್ನದ ಪದಕ ಗೆದ್ದಿದ್ದ ಹಿತೇಶ್ ನಿನ್ನೆ ಪುರುಷರ ೭೦ ಕೆಜಿ ವಿಭಾಗದಲ್ಲಿ ಕ್ವಾರ್ಟರ್-ಫೈನಲ್ಸ್ ನಲ್ಲಿ ಕಝೂಕಿಸ್ತಾನದ ಅಲ್ಮಾಜ್ ಒರೊಜ್ಬೆಕೊವ್ ವಿರುದ್ಧ ೫-೦ ಅಂತರದ ಪ್ರಬಲ ಗೆಲುವು ಸಾಧಿಸಿ ಪದಕದ ಭರವಸೆ ಮೂಡಿಸಿದ್ದಾರೆ. ಮಹಿಳೆಯರ ೫೪ ಕೆಜಿ ವಿಭಾಗದಲ್ಲಿ, ಸಾಕ್ಷಿ ಬ್ರೆಜಿಲ್‌ನ ಟಟಿಯಾನಾ ರೆಜಿನಾ ಡಿ ಜೀಸಸ್ ಚಾಗಸ್ ಅವರನ್ನು ಸೋಲಿಸಿ ಉತ್ತಮ ಪ್ರದರ್ಶನ ನೀಡಿದರು. ಭಾರತೀಯ ಬಾಕ್ಸರ್‌ಗಳಾದ ಮಿನಾಕ್ಷಿ, ಪೂಜಾ ರಾಣಿ ಮತ್ತು ಸಂಜು ಸೆಮಿಫೈನಲ್ಸ್ ಗೆ ಪ್ರವೇಶಿಸಿ ಪದಕದ ಭರವಸೆ ಮೂಡಿಸಿದ್ದಾರೆ. ಕ್ವಾರ್ಟರ್ ಫೈನಲ್ಸ್ ತಲುಪಿರುವ ಅನಾಮಿಕಾ ತಮ್ಮ ಹೋರಾಟ ಮುಂದುವರೆಸಲಿದ್ದಾರೆ.

<><><>

ಇಂಗ್ಲೆಂಡ್ ಕೆನ್ನಿಂಗ್ಟನ್ ಓವಲ್ ನಲ್ಲಿ ಇಂದು ನಡೆಯಲಿರುವ ಮಹಿಳಾ ಟಿ-೨೦ ಕ್ರಿಕೆಟ್‌ನಲ್ಲಿ ಭಾರತದ ವನಿತೆಯರು ಆತಿಥೇಯ ಇಂಗ್ಲೆಂಡ್ ತಂಡವನ್ನು ಎದುರಿಸಲಿದ್ದಾರೆ. ಐದು ಪಂದ್ಯಗಳ ಸರಣಿಯ ೩ನೇ ಪಂದ್ಯದಲ್ಲಿ ಗೆದ್ದು ಸರಣಿಯನ್ನು ಕೈವಶಮಾಡಿಕೊಳ್ಳಲು ಎದುರು ನೋಡುತ್ತಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೧:೦೫ ಕ್ಕೆ ಆರಂಭವಾಗಲಿದೆ. ಮಹಿಳಾ ತಂಡವು ಮೊದಲ ಎರಡು ಪಂದ್ಯಗಳಲ್ಲಿ ಜಯಗಳಿಸಿದೆ. ಮುಂದಿನ ವರ್ಷ ಇಂಗ್ಲೆಂಡ್‌ನಲ್ಲಿ ನಡೆಯಲಿರುವ ಐಸಿಸಿ ಮಹಿಳಾ ಟಿ೨೦ ವಿಶ್ವಕಪ್‌ಗೂ ಮುನ್ನ ಭಾರತದ ಪ್ರಬಲ ಪ್ರದರ್ಶನ ಆತ್ಮವಿಶ್ವಾಸ ಹೆಚ್ಚಿಸಿದೆ.

<><><>

ಕೆನಡಾ ಓಪನ್ ಸೂಪರ್ ೩೦೦ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ನಿನ್ನೆ ಕಿಡಂಬಿ ಶ್ರೀಕಾಂತ್, ಚೈನೀಸ್ ತೈಪೆಯ ವಾಂಗ್ ಪೊ-ವೀ ವಿರುದ್ಧ ನೇರ ಗೇಮ್‌ಗಳ ಜಯ ಸಾಧಿಸುವ ಮೂಲಕ ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದರು. ಮೊದಲ ಗೇಮ್‌ನ ಆರಂಭದಲ್ಲಿಯೇ ಶ್ರೀಕಾಂತ್ ಹಿನ್ನಡೆ ಅನುಭವಿಸಿದರು. ಆದಾಗ್ಯೂ, ವಿಶ್ವದ ೪೯ನೇ ಶ್ರೇಯಾಂಕದ ಆಟಗಾರ ಎರಡೂ ಗೇಮ್‌ಗಳನ್ನು ಸುಲಭವಾಗಿ ಗೆದ್ದು ಉತ್ಸಾಹಭರಿತ ಪ್ರದರ್ಶನ ನೀಡಿದರು. ಮುಂದಿನ ಪಂದ್ಯದಲ್ಲಿ ನಾಳೆ ಅವರು ನಂ. ೧ ಶ್ರೇಯಾಂಕಿತ ತೈವಾನ್‌ನ ಚೌ ಟಿಯೆನ್-ಚೆನ್ ಅವರನ್ನು ಎದುರಿಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>